ಕರ್ನಾಟಕ ಸರ್ಕಾರ
ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
E-mail:Commissioner.pue@gmail.com. Ph. No.23361857, 23361858* Fax-23361852

ಸಂಖ್ಯೆ: ಪಪೂಶಿಇ/ಆಡಳಿತ-1/GPL/ಸಿಆರ್-01/ಪ್ರಾ.ವರ್ಗ/01/2022-23 ದಿನಾಂಕ: 7 -11-2022

## ಜ್ಞಾಪನ

**ವಿಷಯ:-** 2022-23ನೇ ಸಾಲಿನಲ್ಲಿ ನಡೆಯುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ಸಾಮಾನ್ಯ ವರ್ಗಾವಣೆ ಕೌನ್ಸೆಲಿಂಗ್‌ಗಾಗಿ ಪ್ರಾಂಶುಪಾಲರ ಖಾಲಿ ಹುದ್ದೆ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ

**ಉಲ್ಲೇಖ:-**
1. ಈ ಕಚೇರಿ ಜ್ಞಾಪನ ಪತ್ರ ಸಂಖ್ಯೆ: ಪಪೂಶಿಇ/ಆವಿಎ/ಉ.ವರ್ಗ/01/ 2022-23 ದಿನಾಂಕ: 18-05-2022.
2. ಈ ಕಚೇರಿ ಸಮ ಸಂಖ್ಯೆ ಜ್ಞಾಪನ ದಿನಾಂಕ: 01-10-2022 ಮತ್ತು 14-10-2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳ 2022-23ನೇ ಸಾಲಿನ ಸಾಮಾನ್ಯ ವರ್ಗಾವಣೆ ಕೌನ್ಸೆಲಿಂಗ್‌ಗಾಗಿ ಅನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಉಲ್ಲೇಖ-01ರನ್ವಯ ಅವಕಾಶ ಕಲ್ಪಿಸಲಾಗಿದೆ. ಉಲ್ಲೇಖ-02ರನ್ವಯ ದಿನಾಂಕ: 01-10-2022ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳ ಖಾಲಿ ಹುದ್ದೆಗಳ ಜಿಲ್ಲಾವಾರು ಮಾಹಿತಿಯನ್ನು ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಿ ದಿನಾಂಕ: 21-10-2022ರ ವರೆಗೆ ಜಿಲ್ಲಾ ಉಪ ನಿರ್ದೇಶಕರ ಮುಖೇನ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಅದರಂತೆ, ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಪ್ರಾಂಶುಪಾಲರ ಖಾಲಿ ಹುದ್ದೆಗಳ ಅಂತಿಮ ಪಟ್ಟಿಯನ್ನು ದಿನಾಂಕ: 27-10-2022ರಂದು ಪ್ರಕಟಿಸಲಾಗಿದೆ. ಆದರೆ ದಿನಾಂಕ: 02-11-2022ರಂದು ಕೌನ್ಸಲಿಂಗ್ ಸಮಯದಲ್ಲಿ ರಾಯಚೂರು ಜಿಲ್ಲಾ ಉಪ ನಿರ್ದೇಶಕರು, ಜಿಲ್ಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಖಾಲಿ ಹುದ್ದೆಗಳ ಬಗ್ಗೆ ನಿಗದಿತ ಅವಧಿಯಲ್ಲಿ ಅಪ್‌ಡೇಟ್‌ಗೆ ಮಾಹಿತಿಯನ್ನು ಸಲ್ಲಿಸಿರುವುದಿಲ್ಲ. ಇದೇ ರೀತಿಯಾಗಿ ಕೆಲವೊಂದು ಜಿಲ್ಲೆಗಳ ಉಪ ನಿರ್ದೇಶಕರುಗಳು ಸಹ ಪ್ರಾಂಶುಪಾಲರ ಹುದ್ದೆಗಳು ನಿವೃತ್ತಿ/ನಿಧನದಿಂದ ಖಾಲಿ ಆಗಿರುವ ಅವುಗಳನ್ನು ಅಪ್‌ಡೇಟ್ ಮಾಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಮಾಹಿತಿಯನ್ನು ಮಿಂಚಂಚೆ dpuetransfer22@gmail.com ಮೂಲಕ ದಿನಾಂಕ: 02-11-2022ರ ಮಧ್ಯಾಹ್ನ 01:00 ಗಂಟೆಯೊಳಗೆ ಸಲ್ಲಿಸಲು ತಿಳಿಸಲಾಗಿತ್ತು. ಈ ಕಛೇರಿಗೆ ಸ್ವೀಕೃತಗೊಂಡಿರುವ ಪ್ರಾಂಶುಪಾಲರುಗಳ ಖಾಲಿ ಹುದ್ದೆಗಳ ಮಾಹಿತಿಯನ್ನು ಇಂದೀಕರಿಸಿ ಪರಿಷ್ಕರಿಸಿದ ಅಂತಿಮ ಪಟ್ಟಿಯನ್ನು ಸಿದ್ದಪಡಿಸಿ ಇದರೊಂದಿಗೆ ಲಗತ್ತಿಸಿ ಮಿಂಚಂಚೆ ಮೂಲಕ ಜಿಲ್ಲಾ ಉಪನಿರ್ದೇಶಕರ ಕಚೇರಿಗೆ ಕಳುಹಿಸಲಾಗಿದೆ ಹಾಗೂ ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ